# <u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.</u>

**<u>ಸಿ.ಸಿ. 173/2024</u>**

<u>ಫಿರ್ಯಾದುದಾರರು</u> ಃ  ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ಧ-

<u>ಆರೋಪಿ/ತರು</u> ಃ  ಶ್ರೀಮತಿ ಜ್ಯೋತಿ ಮತ್ತು ಇತರರು

<u>-ಃದೋಷಾರೋಪಣೆಃ-</u>

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

1. ಶ್ರೀಮತಿ ಜ್ಯೋತಿ ಟಿ ಆರ್ ಬಿನ್ ರಾಜು, 35 ವರ್ಷ, ವಾಸಃದೊಡ್ಡಯ್ಯ ಬೀದಿ, ತರೀಕೆರೆ.
2. ರಾಜು ಬಿನ್ ಲೇಟ್ ನಾಗರಾಜಪ್ಪ, 45 ವರ್ಷ, ಕೂಲಿ ಕೆಲಸ, ವಾಸಃದೊಡ್ಡಯ್ಯ ಬೀದಿ, ತರೀಕೆರೆ.
3. ಚಂದ್ರಮ್ಮ ಕೋಂ ಲೇಟ್ ರಾಮಪ್ಪ, 58 ವರ್ಷ, ವಾಸಃತಂಗಿಲ್ಲ ತಾಂಡ್ಯ, ಕಡೂರು ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿಃ12.02.2024 ರಂದು ಬೆಳಿಗ್ಗೆ 10-30 ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ದೊಡ್ಡಯ್ಯನ ಬೀದಿ, ತರೀಕೆರೆಯ ಚಾಸಾ-6 ರವರ ಹೆಸರಿನಲ್ಲಿರುವ ಮನೆಯ ವಿಚಾರವಾಗಿ ಚಾಸಾ-1 ರವರಿಗೆ ಆರೋಪಿತರಾದ ನೀವುಗಳು ಜಗಳ ಮಾಡಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**504** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವುಗಳು ಕೈಗಳಿಂದ ಚಾಸಾ-1 ರವರಿಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**323** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 2 ನೇ ಆರೋಪಿಯಾದ ನೀವು ಕಬ್ಬಿಣದ ರಾಡಿನಿಂದ ಚಾಸಾ-1 ರವರ ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**324** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವುಗಳು ಚಾಸಾ-1 ರವರಿಗೆ ನಿನ್ನನ್ನು ಸಾಯಿಸುತ್ತೇನೆಂದು ಪ್ರಾಣ ಬೆದರಿಕೆ ಹಾಕಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**506** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 2 ನೇ ಆರೋಪಿಯಾದ ನೀವು ಚಾಸಾ-1 ರವರ ಮೈಮೇಲಿದ್ದ ಬಟ್ಟೆಯನ್ನು ಹರಿದು, ಸಾರ್ವಜನಿಕವಾಗಿ ಅವರಿಗೆ ಮಾನಹಾನಿ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**354** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 2 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಚಪ್ಪಲಿಯಿಂದ ಹೊಡೆದು ಅವರಿಗೆ ಅವಮಾನವನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**355** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿಃ 02.09.2025

Sd/-
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?

ಉಃ

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ 02.09.2025

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ